**ಒಂದನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹುಣಸೂರು**

**ಸಿ.ಸಿ. 13/2022**

**ಸಿ.ಡಬ್ಲ್ಯೂ -6, ಪಿ.ಡಬ್ಲ್ಯೂ 4**

ದಿಃ **15.07.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| **ಸಾಕ್ಷಿಯ ಹೆಸರು** | ತಮ್ಮಣ್ಣ |
| **ತಂದೆ/ಗಂಡನ ಹೆಸರು** | ಲೇಟ್ ಎಂ ಡಿ ದೇವರಾಜೇಗೌಡ |
| **ವಯಸ್ಸು** | 63 ವರ್ಷ |
| **ಕೆಲಸ** | ನಿವೃತ್ತ ಎ ಎಸ್ ಐ |
| ವಾಸಸ್ಥಳ | ಇಲವಾಲ |

**ಮುಖ್ಯ ವಿಚಾರಣೆ ಮಾನ್ಯ ಎ.ಪಿ.ಪಿ.ಯವರಿಂದ:**

ನಾನು ದಿಃ17.07.2017 ರಿಂದ 31.05.2023 ರವರೆಗೆ ಬಿಳಿಕೆರೆ ಠಾಣೆಯಲ್ಲಿ ಎ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ06.12.2021 ರಂದು ಮಧ್ಯಾಹ್ನ 12.15 ಗಂಟೆ ಸಮಯದಲ್ಲಿ ಠಾಣಾ ಉಸ್ತುವಾರಿಯಲ್ಲಿದ್ದಾಗ ಚಾಸಾ1 ರವರು ಠಾಣೆಗೆ ಬಂದು ಕೊಟ್ಟ ಲಿಖಿತ ದೂರನ್ನು ಪಡೆದು ಠಾಣಾ ಮೊಕದ್ದಮೆ ಸಂಖ್ಯೆ 379/2021 ರಂತೆ ಪ್ರಕರಣವನ್ನು ದಾಖಲಿಸಿ ಪ್ರ ವ ವರದಿಯನ್ನು ನ್ಯಾಯಾಲಯಕ್ಕೂ ಹಾಗೂ ಇಲಾಖಾ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿ ನಿಪಿ1 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿ ಪ್ರ ವ ವರದಿಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ4 ಮತ್ತು ಸಾಕ್ಷಿಯ ಸಹಿಯನ್ನು ನಿಪಿ4(ಎ) ಎಂದು ಗುರುತಿಸಲಾಯಿತು. ನಂತರ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಚಾಸಾ1 ರವರು ಸ್ಥಳವನ್ನು ತೋರಿಸಿದ ಮೇರೆಗೆ ಪಂಚರಾದ ಚಾಸಾ3 ಮತ್ತು 4 ರವರ ಸಮಕ್ಷಮ ನಿಪಿ2 ರಂತೆ ಮಧ್ಯಾಹ್ನ 2 ರಿಂದ 3 ಗಂಟೆವರೆಗೆ ಮಹಜರ್ ಕ್ರಮ ಜರುಗಿಸಿರುತ್ತೇನೆ. ಸಾಕ್ಷಿ ನಿಪಿ2 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ2(ಬಿ) ಎಂದು ಗುರುತಿಸಲಾಯಿತು. ಮಹಜರ್ ಕಾಲದಲ್ಲಿ ಕೆ ಎ 09 ಸಿ 4620 ಬೊಲೆರೋ ಪಿಕಪ್ ವಾಹನ ಮತ್ತು ಕೆ ಎ 07 ಎಫ್ 1836 ಕೆ ಎಸ್ ಆರ್ ಟಿ ಸಿ ಬಸ್ಸನ್ನು ಅಮಾನತ್ತುಪಡಿಸಿಕೊಂಡು ಠಾಣಾ ಮಾಲುಪಟ್ಟಿಗೆ ಅಳವಡಿಸಿರುತ್ತೇನೆ. ಸಾಕ್ಷಿ ವಾಹನಗಳ ಪೋಟೋಗಳನ್ನು ನೋಡಿ ಗುರುತಿಸಿರುತ್ತಾರೆ. ದಿಃ07.12.2021 ರಂದು ಕೆ ಎಸ್ ಆರ್ ಟಿ ಸಿ ಘಟಕ ವ್ಯವಸ್ಥಾಪಕರಿಗೆ ಬಸ್ ಚಾಲಕ ಮತ್ತು ನಿರ್ವಾಹಕರ ಕರ್ತವ್ಯದ ವಿಚಾರವಾಗಿ ದೃಡೀಕರಣ ಪತ್ರವನ್ನು ಹಾಗೂ ಲಾಗ್ ಶೀಟನ್ನು ಪಡೆದಿರುತ್ತೇನೆ. ಸಾಕ್ಷಿ ದೃಡೀಕರಣ ಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ5 ಮತ್ತು ಸಾಕ್ಷಿ ಸಹಿಯನ್ನು ನಿಪಿ5(ಎ) ಮತ್ತು ಲಾಟ್ ಶೀಟನ್ನು ನಿಪಿ6 ಮತ್ತು ಸಾಕ್ಷಿ ಸಹಿಯನ್ನು ನಿಪಿ6(ಎ) ಎಂದು

ಗುರುತಿಸಲಾಯಿತು. ಬೊಲೆರೊ ವಾಹನ ಮಾಲೀಕರಿಗೆ ಹಾಗೂ ಕೆ ಎಸ್ ಆರ್ ಟಿ ಸಿ ಘಟಕ ವ್ಯವಸ್ಥಾಪಕರಿಗೆ 133 ಐ ಎಂ ವಿ ಅಡಿಯಲ್ಲಿ ನೋಟಿಸ್ಸನ್ನು ನೀಡಿ ಪ್ರತ್ಯುತ್ತರವನ್ನು ಪಡೆದಿರುತ್ತೇನೆ. 133 ಅಡಿಯಲ್ಲಿ ನೀಡಿರುವ ನೋಟಿಸ್ ಗಳನ್ನು ನಿಪಿ7 ಮತ್ತು 8 ಸಾಕ್ಷಿ ಸಹಿಗಳನ್ನು ನಿಪಿ7(ಎ) ಮತ್ತು 8(ಎ) ಹಾಗೂ ಪ್ರತ್ಯುತ್ತರಗಳನ್ನು ನಿಪಿ9 ಮತ್ತು 10 ಹಾಗೂ ಸಾಕ್ಷಿಯ ಸಹಿಗಳನ್ನು ನಿಪಿ 9(ಎ) ಮತ್ತು 10(ಎ) ಎಂದು ಗುರುತಿಸಲಾಯಿತು. ಅಮಾನತ್ತುಪಡಿಸಿಕೊಂಡ ವಾಹನಗಳನ್ನು ಹುಣಸೂರಿನ ಆರ್ ಟಿ ಓ ಕಛೇರಿಗೆ ತಪಾಸಣೆಗೆ ನಿವೇದಿಸಿಕೊಂಡಿರುತ್ತೇನೆ. ತಪಾಸಣೆಯಾದ ನಂತರ ಆರ್ ಸಿ ಮಾಲೀಕರಿಂದ ಇಂಡೆಮಿನಿಟಿ ಬಾಂಡ್‌ಗಳನ್ನು ಪಡೆದ ವಾಹನಗಳನ್ನು ಮಾಲೀಕರಿಗೆ ನೀಡಿರುತ್ತೇನೆ. ಇಂಡೆಮಿನಿಟಿ ಬಾಂಡ್ ಗಳನ್ನು ನಿಪಿ11 ಮತ್ತು 12 ಎಂದು ಸಾಕ್ಷಿಯ ಸಹಿಗಳನ್ನು ನಿಪಿ11(ಎ) ಮತ್ತು 12(ಎ) ಎಂದು ಗುರುತಿಸಲಾಯಿತು. ಆರೋಪಿಗೆ 41(ಎ) ನೋಟಿಸ್ಸನ್ನು ಜಾರಿ ಮಾಡಿ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ದಿಃ10.12.2021 ರಂದು ಚಾಸಾ2 ರವರ ಹೇಳಿಕೆಯನ್ನು ಪಡೆದಿರುತ್ತೇನೆ. ದಿಃ21.12.2021 ರಂದು ಆರ್ ಟಿ ಓ ಅಧಿಕಾರಿಯಿಂದ ಐ ಎಂ ವಿ ವರದಿಯನ್ನು ಪಡೆದು ಕಡತದಲ್ಲಿ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿ ಐ ಎಂ ವಿ ವರದಿಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ3(ಎ) ಎಂದು ಗುರುತಿಸಲಾಯಿತು. ಆರೋಪಿಯ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಸಲ್ಲಿರುತ್ತೇನೆ. ಸಾಕ್ಷಿ ನ್ಯಾಯಾಲಯದ ಮುಂದಿರುವ ಆರೋಪಿಯನ್ನು ಗುರುತಿಸಿರುತ್ತಾರೆ.

<u>**ಪಾಟೀಸವಾಲು ಆರೋಪಿತರ ಪರ ಕುಮಾರಿ ಎಸ್ ಎಂ ವಕೀಲರಿಂದಃ**</u>

ಪ್ರಕರಣದಲ್ಲಿ ಯಾವುದೇ ತನಿಖೆಯನ್ನು ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಚಾಸಾ1 ರವರೊಂದಿಗೆ ಶಾಮೀಲಾಗಿ ಆರೋಪಿಯ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೆ ತೊಂದರೆ ಕೊಡುವ ಉದ್ದೇಶದಿಂದ ಯಾವುದೇ ವಿಚಾರಣೆ ಮಾಡದೇ ಸುಳ್ಳು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಚಾಸಾ1 ರವರು ಪರಿಹಾರವನ್ನು ಪಡೆಯಲು ಅನುಕೂಲವಾಗಲಿ ಎಂದು ಆರೋಪಿಯ ತಪ್ಪಿನಿಂದ ಯಾವುದೇ ಅಪಘಾತವಾಗಿರುವುದಿಲ್ಲ, ಆತನ ಮೇಲೆ ಸುಳ್ಳು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಸ್ಥಳಕ್ಕೆ ಹೋಗಿ ವಿಚಾರಣೆ ಮಾಡದೇ, ಸಾಕ್ಷಿದಾರರ ಹೇಳಿಕೆಯನ್ನು ಪಡೆಯದೇ ಆರೋಪಿಯ ವಿರುದ್ಧ ಸುಳ್ಳು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ. ಚಾಸಾ1 ರವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಸಿ.ಸಿ. 13/2022**

ಸಿ.ಡಬ್ಲ್ಯೂ -6, ಪಿ.ಡಬ್ಲ್ಯೂ 4

**ಮರುವಿಚಾರಣೆಃ**ಇಲ್ಲ.

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ.ಸ.ಇದೆ.

ಒಂದನೇ ಅಪರ ಸಿವಿಲ್ ಮತ್ತು ಜೆ.ಎಂ.ಎಫ್.ಸಿ
ನ್ಯಾಯಾಧೀಶರು, ಹುಣಸೂರು.